ಉದಯವಾಣಿ

**Pg.No.01**

# ಮೇ 2ರಿಂದ ಸಿಇಟಿ ಕನ್ನಡದಲ್ಲೂ ಪ್ರಶ್ನೆಪತ್ರಿಕೆ

| ಹೊರನಾಡು ಮತ್ತು ಗಡಿನಾಡು ಕನ್ನಡಿಗ ಅಭ್ಯರ್ಥಿಗಳಿಗೆ ಮೇ 4 ರಂದು ಬೆಂಗಳೂರು ಕೇಂದ್ರದಲ್ಲಿ ಕನ್ನಡ ಭಾಷಾ ಪರೀಕ್ಷೆ | **ಮೇ 2**<br>ಬೆಳಗ್ಗೆ 10.30-11.50 ಜೀವಶಾಸ್ತ್ರ<br>ಮಧ್ಯಾಹ್ನ 2.30-3.50 ಗಣಿತ<br>**ಮೇ 3**<br>ಬೆಳಗ್ಗೆ 10.30-11.50 ಭೌತಶಾಸ್ತ್ರ<br>ಮಧ್ಯಾಹ್ನ 2.30-3.50 ರಸಾಯನಶಾಸ್ತ್ರ |
|---|---|

**ಬೆಂಗಳೂರು:** ವೃತ್ತಿಪರ ಕೋರ್ಸ್‌ಗಳ ಸೀಟು ಹಂಚಿಕೆಗಾಗಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಮೇ 2 ಮತ್ತು 3ರಂದು ಸಾಮಾನ್ಯ ಪ್ರವೇಶ ಪರೀಕ್ಷೆ(ಸಿಇಟಿ) ನಡೆಸಲಿದ್ದು, ಈ ಬಾರಿ ಇಂಗ್ಲಿಷ್ ಜತೆಗೆ ಕನ್ನಡದಲ್ಲೂ ಪ್ರಶ್ನೆಪತ್ರಿಕೆ ಲಭ್ಯವಿದೆ.

ಸಿಇಟಿ ಪರೀಕ್ಷೆಗಾಗಿ ಬೆಂಗಳೂರಿನ 82 ಕೇಂದ್ರ ಸೇರಿದಂತೆ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ 404 ಪರೀಕ್ಷಾ ಕೇಂದ್ರ ಗುರುತಿಸಲಾಗಿದೆ. 94,415 ಪುರುಷ ಅಭ್ಯರ್ಥಿಗಳು ಹಾಗೂ 90,996 ಮಹಿಳಾ ಅಭ್ಯರ್ಥಿಗಳು ಸೇರಿದಂತೆ 1,85,411 ಅಭ್ಯರ್ಥಿಗಳು ಸಿಇಟಿಗೆ ನೋಂದಣಿ ಮಾಡಿಕೊಂಡಿದ್ದಾರೆ. ಹೊರನಾಡು, ಗಡಿನಾಡು ಕನ್ನಡ ಭಾಷಾ ಪರೀಕ್ಷೆಗೆ 1,800 ಅಭ್ಯರ್ಥಿಗಳು ಹೆಸರು ನೋಂದಾಯಿಸಿಕೊಂಡಿದ್ದಾರೆ.

ಆಯಾ ಜಿಲ್ಲೆಯ ಕೇಂದ್ರಗಳಿಗೆ ಸಹಾಯಕ ಆಯುಕ್ತರೇ ವೀಕ್ಷಕರಾಗಿರುತ್ತಾರೆ. ಪರೀಕ್ಷಾ ದಿನಗಳಂದು ರಾಜ್ಯದ ಎಲ್ಲ ಪರೀಕ್ಷಾ ಕೇಂದ್ರಗಳಿಗೆ, ಖಜಾನೆಗಳಿಗೆ ಹೆಚ್ಚಿನ ಪೊಲೀಸ್ ಭದ್ರತೆ ನೀಡಲು ಆಯಾ ಜಿಲ್ಲೆಯ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ರಾಜ್ಯ ಪೊಲೀಸ್ ಮಹಾನಿರ್ದೇಶಕರು ಸೂಚನೆ ನೀಡಿದ್ದಾರೆ. 404 ಪರೀಕ್ಷಾ ಕೇಂದ್ರಕ್ಕೆ 404 ವೀಕ್ಷಕರು, 808 ವಿಶೇಷ ಜಾಗೃತ ದಳದ ಸದಸ್ಯರು, 404 ಪ್ರಶ್ನೆ ಪತ್ರಿಕೆ ಪಾಲಕರು, 11,625 ಕೊಠಡಿ ಮೇಲ್ವಿಚಾರಕರು ಹಾಗೂ 32,000 ಅಧಿಕಾರಿ ಹಾಗೂ ಸಿಬ್ಬಂದಿ ನೇಮಕ ಮಾಡಲಾಗಿದೆ.

▶ 12ನೇ ಪುಟಕ್ಕೆ

ಉದಯವಾಣಿ



# ಮೇ 2ರಿಂದ ಕನ್ನಡದಲ್ಲೂ ಸಿಇಟಿ ಪ್ರಶ್ನೆಪತ್ರಿಕೆ

**1ನೇ ಪುಟದಿಂದ** ▶ ರಾಜ್ಯ ಸರ್ಕಾರ ಇದೇ ಮೊದಲ ಬಾರಿಗೆ ಸಿಇಟಿ ಪ್ರಶ್ನೆ ಪತ್ರಿಕೆಯನ್ನು ಕನ್ನಡ ಮತ್ತು ಇಂಗ್ಲಿಷ್ ಮಾಧ್ಯಮದಲ್ಲಿ ಮುದ್ರಿಸಲಿದೆ. ಅಭ್ಯರ್ಥಿಗಳು ಎರಡನೇ ದಿನ ಕೊನೆಯ ಅವಧಿಯ ಪರೀಕ್ಷೆ ಮುಗಿದ ನಂತರ ಪರೀಕ್ಷಾ ಕೇಂದ್ರದಿಂದಲೇ ಸಿಇಟಿ ಬ್ರೋಷರ್ ಪಡೆದುಕೊಳ್ಳಬೇಕು. ಪರೀಕ್ಷೆಗೆ ಒಎಂಆರ್ ಶೀಟ್‌ಗಳನ್ನು ಬಳಸುವುದರಿಂದ ಬ್ಲೂ ಅಥವಾ ಬ್ಯಾಕ್ ಬಣ್ಣದ ಬಾಲ್ ಪೆನ್ ಉಪಯೋಗಿಸಬೇಕು. ಪರೀಕ್ಷಾವಧಿ ಆರಂಭಕ್ಕೂ ಅರ್ಧಗಂಟೆ ಮೊದಲೇ ಪರೀಕ್ಷಾ ಕೇಂದ್ರ ತಲುಪಿರಬೇಕು ಎಂದು ಉನ್ನತ ಶಿಕ್ಷಣ ಇಲಾಖೆ ವಿದ್ಯಾರ್ಥಿಗಳಿಗೆ ಪ್ರಕಟಣೆಯಲ್ಲಿ ತಿಳಿಸಿದೆ.

**ವಾಚ್ ಕಟ್ಟಿ ಪರೀಕ್ಷೆ ಬರೆಯುವಂತಿಲ್ಲ:** ಪ್ರವೇಶ ಪತ್ರದ ಜತೆಗೆ ಅಭ್ಯರ್ಥಿಯು ಕಡ್ಡಾಯವಾಗಿ ಮಾನ್ಯತೆ ಇರುವ ಯಾವುದಾದರು ಗುರುತಿನ ಚೀಟಿ, ದ್ವಿತೀಯ ಪಿಯುಸಿ ಪ್ರವೇಶ ಪತ್ರ, ಬಸ್ ಪಾಸ್, ಡ್ರೈವಿಂಗ್ ಲೈಸೆನ್ಸ್, ಆಧಾರ್ ಕಾರ್ಡ್ ಅಥವಾ ಪಾನ್‌ಕಾರ್ಡ್ ತೆಗೆದುಕೊಂಡು ಹೋಗಬೇಕು. ಪರೀಕ್ಷಾ ಕೇಂದ್ರದ ಒಳಗೆ ಕೈಗಡಿಯಾರ ಕಟ್ಟಿಕೊಂಡು ಹೋಗುವಂತಿಲ್ಲ. ಟ್ಯಾಬ್ಲೆಟ್, ಮೊಬೈಲ್ ಹಾಗೂ ಕ್ಯಾಲುಕ್ಯುಲೇಟರ್ ಕೊಂಡೊಯ್ಯುವಂತಿಲ್ಲ ಎಂಬ ನಿರ್ದೇಶನ ನೀಡಿದೆ.

ವಿಜಯ ಕರ್ನಾಟಕ



# ಸಿಇಟಿ: ಅರ್ಧ ಗಂಟೆ ಮುಂಚಿತವಾಗಿ ಹಾಜರಾಗಿ

## ಮೇ 2, 3ರಂದು ಪರೀಕ್ಷೆ, ಕನ್ನಡ-ಇಂಗ್ಲಿಷ್‌ನಲ್ಲಿ ಪ್ರಶ್ನೆಪತ್ರಿಕೆ ಮುದ್ರಣ

■ **ವಿಕ ಸುದ್ದಿಲೋಕ** ಬೆಂಗಳೂರು

ವೃತ್ತಿಪರ ಶಿಕ್ಷಣ ಕೋರ್ಸ್‌ಗಳ ಪ್ರವೇಶಕ್ಕೆ ಮೇ 2 ಮತ್ತು 3ರಂದು ನಡೆಯಲಿರುವ ಸಾಮಾನ್ಯ ಪ್ರವೇಶ ಪರೀಕ್ಷೆ (ಸಿಇಟಿ)ಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಇದೇ ಮೊದಲ ಬಾರಿಗೆ ಕನ್ನಡ ಮತ್ತು ಇಂಗ್ಲಿಷ್ ಮಾಧ್ಯಮಗಳೆರಡರಲ್ಲೂ ಪ್ರಶ್ನೆ ಪತ್ರಿಕೆಯನ್ನು ಮುದ್ರಿಸುತ್ತಿದೆ.

ಇದುವರೆಗೆ ಇಂಗ್ಲಿಷ್‌ನಲ್ಲಿ ಮಾತ್ರ ಕೆಇಎ ಸಿಇಟಿ ಪ್ರಶ್ನೆ ಪತ್ರಿಕೆಯನ್ನು ಸಿದ್ಧಪಡಿಸುತ್ತಿತ್ತು. ಆದರೆ, ವೈದ್ಯ ಹಾಗೂ ದಂತ ವೈದ್ಯ ಕೋರ್ಸ್‌ಗಳ ಪ್ರವೇಶಕ್ಕೆ ಮೇ 7ರಂದು ನಡೆಯಲಿರುವ ರಾಷ್ಟ್ರೀಯ ಅರ್ಹತಾ ಮತ್ತು ಪ್ರವೇಶ ಪರೀಕ್ಷೆ (ನೀಟ್)ಯನ್ನು ಸಿಬಿಎಸ್‌ಇ ಕನ್ನಡದಲ್ಲೂ ನಡೆಸುತ್ತಿರುವುದರಿಂದ ಕರ್ನಾಟಕ ಪರೀಕ್ಷಾ ಪ್ರಾಧಿಕಾರವೂ ಕನ್ನಡ ಮತ್ತು ಇಂಗ್ಲಿಷ್ ಮಾಧ್ಯಮದಲ್ಲಿ ಪ್ರಶ್ನೆ ಪತ್ರಿಕೆಗಳನ್ನು ಮುದ್ರಿಸುತ್ತಿದೆ.

ಅಭ್ಯರ್ಥಿಗಳು ಪರೀಕ್ಷಾ ವೇಳಾಪಟ್ಟಿಯನ್ನು ಗಮನದಲ್ಲಿಟ್ಟುಕೊಂಡು ಪರೀಕ್ಷೆಯ ಮೊದಲನೇ ಬೆಲ್ ಆಗುವ ಅರ್ಧ ಗಂಟೆ ಮುನ್ನ ಪರೀಕ್ಷಾ ಕೇಂದ್ರವನ್ನು ತಲುಪಬೇಕು. ಅಲ್ಲದೆ, ಒಎಂಆರ್ ಉತ್ತರ ಪತ್ರಿಕೆಯಲ್ಲಿ ಶೇಡ್ ಮಾಡುವ ಮೂಲಕ ಉತ್ತರಿಸಬೇಕಾಗಿರುವುದರಿಂದ ಬ್ಲೂ ಅಥವಾ ಬ್ಲ್ಯಾಕ್ ಇಂಕ್‌ನ ಬಾಲ್ ಪಾಯಿಂಟ್ ಪೆನ್ ತರಬೇಕು ಎಂದು ಉನ್ನತ ಶಿಕ್ಷಣ ಸಚಿವ ಬಸವರಾಜ ರಾಯರೆಡ್ಡಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಗುರುತಿನ ಚೀಟಿ ಕಡ್ಡಾಯ

ಅಭ್ಯರ್ಥಿಗಳು ಪ್ರವೇಶಪತ್ರದ ಜತೆಯಲ್ಲಿ ಮಾನ್ಯತೆ ಇರುವ ಯಾವುದಾದರೂ ಒಂದು ಗುರುತಿನ ಚೀಟಿಯನ್ನು ಪರೀಕ್ಷಾ ಕೇಂದ್ರಕ್ಕೆ ಕೊಂಡೊಯ್ಯುವುದನ್ನು ಕಡ್ಡಾಯ ಮಾಡಲಾಗಿದೆ. ದ್ವಿತೀಯ ಪಿಯುಸಿ/12ನೇ ತರಗತಿಯ ಪ್ರವೇಶಪತ್ರ, ಬಸ್ ಪಾಸ್, ಡ್ರೈವಿಂಗ್ ಲೈಸನ್ಸ್, ಪಾಸ್‌ಪೋರ್ಟ್, ಆಧಾರ್ ಕಾರ್ಡ್, ಪಾನ್ ಕಾರ್ಡ್ ಪೈಕಿ ಯಾವುದಾದರೂ ಒಂದು ಗುರುತಿನ ಚೀಟಿಯನ್ನು ತೋರಿಸುವುದು ಕಡ್ಡಾಯವಾಗಿದೆ.

ಅಭ್ಯರ್ಥಿಗಳು ಪರೀಕ್ಷಾ ಕೊಠಡಿಯೊಳಗೆ ಯಾವುದೇ ರೀತಿಯ ಕೈಗಡಿಯಾರ ಕಟ್ಟಿಕೊಂಡು ಹೋಗುವಂತಿಲ್ಲ. ಟ್ಯಾಬ್ಲೆಟ್, ಮೊಬೈಲ್ ಹಾಗೂ ಕ್ಯಾಲ್ಕುಲೇಟರ್‌ಗಳನ್ನು ಕೂಡ ನಿಷೇಧ ಮಾಡಲಾಗಿದೆ.

### 1.85 ಲಕ್ಷ ವಿದ್ಯಾರ್ಥಿಗಳ ನೋಂದಣಿ

ಈ ಬಾರಿ ಒಟ್ಟು 1,85,411 ಅಭ್ಯರ್ಥಿಗಳು ಪರೀಕ್ಷೆಗೆ ನೋಂದಣಿ ಮಾಡಿದ್ದಾರೆ. ಈ ಪೈಕಿ 94,415 ಪುರುಷ ಹಾಗೂ 90,996 ಮಹಿಳಾ ಅಭ್ಯರ್ಥಿಗಳು ಸೇರಿದ್ದಾರೆ. ರಾಜ್ಯದ 404 ಪರೀಕ್ಷಾ ಕೇಂದ್ರಗಳಲ್ಲಿ ಸಿಇಟಿ ನಡೆಯಲಿದ್ದು, ಈ ಪೈಕಿ 82 ಪರೀಕ್ಷಾ ಕೇಂದ್ರಗಳು ಬೆಂಗಳೂರಿನಲ್ಲೇ ಇವೆ.

ಮೇ 4ರಂದು ಹೊರನಾಡು ಮತ್ತು ಗಡಿನಾಡು ಕನ್ನಡಿಗ ಅಭ್ಯರ್ಥಿಗಳಿಗೆ ಕನ್ನಡ ಭಾಷಾ ಪರೀಕ್ಷೆಯು ಬೆಂಗಳೂರು ಕೇಂದ್ರದಲ್ಲಿ ಮಾತ್ರ ನಡೆಯಲಿದ್ದು, 1800 ಅಭ್ಯರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ.

"ಆಯಾ ಜಿಲ್ಲೆಯ ಜಿಲ್ಲಾಧಿಕಾರಿಗಳು ಪ್ರತಿ ಪರೀಕ್ಷಾ ಕೇಂದ್ರಗಳಿಗೆ ಸಹಾಯಕ ಆಯುಕ್ತರನ್ನು ವೀಕ್ಷಕರನ್ನಾಗಿ ನೇಮಿಸಿದ್ದಾರೆ. ಪರೀಕ್ಷಾ ದಿನಗಳಂದು ರಾಜ್ಯದ ಎಲ್ಲಾ ಪರೀಕ್ಷಾ ಕೇಂದ್ರಗಳು/ ಖಜಾನೆಗಳಿಗೆ ಹೆಚ್ಚಿನ ಪೊಲೀಸ್ ಭದ್ರತೆ ನೀಡುವ ಸಂಬಂಧ ಆಯಾ ಜಿಲ್ಲಾ ಎಸ್‌ಪಿಗಳಿಗೆ ನಿರ್ದೇಶನ ನೀಡುವಂತೆ ರಾಜ್ಯ ಪೊಲೀಸ್ ಮಹಾನಿರ್ದೇಶಕರನ್ನು ಕೋರಲಾಗಿದೆ," ಎಂದು ಸಚಿವ ರಾಯರೆಡ್ಡಿ ತಿಳಿಸಿದ್ದಾರೆ.

ಪರೀಕ್ಷೆಗಾಗಿ 404 ವೀಕ್ಷಕರು, 808 ವಿಶೇಷ ಜಾಗೃತ ದಳದ ಸದಸ್ಯರು, 404 ಪ್ರಶ್ನೆ ಪತ್ರಿಕೆ ಪಾಲಕರು, 11,625 ಕೊಠಡಿ ಮೇಲ್ವಿಚಾರಕರು, 32,000 ಅಧಿಕಾರಿ ಮತ್ತು ಸಿಬ್ಬಂದಿಗಳನ್ನು ಬಳಸಿಕೊಳ್ಳಲಾಗುತ್ತಿದೆ. ಅಭ್ಯರ್ಥಿಗಳು ಮೇ 3ರಂದು ಕೊನೇ ಅವಧಿಯ ಪರೀಕ್ಷೆ ಮುಗಿದ ನಂತರ ಪರೀಕ್ಷಾ ಕೇಂದ್ರಗಳಿಂದ ಪ್ರೊಟೋಕಾಲ್... 

TIME TABLE

| ದಿನಾಂಕ | ದಿನ | ಸಮಯ | ವಿಷಯ | ಅಂಕ |
|---|---|---|---|---|
| ಮೇ 2 | ಮಂಗಳವಾರ | ಬೆಳಗ್ಗೆ 10.30ರಿಂದ 11.50 | ಜೀವಶಾಸ್ತ್ರ | 60 |
| | | ಮಧ್ಯಾಹ್ನ 2.30ರಿಂದ 3.50 | ಗಣಿತಶಾಸ್ತ್ರ | 60 |
| ಮೇ 3 | ಬುಧವಾರ | ಬೆಳಗ್ಗೆ 10.30ರಿಂದ 11.50 | ಭೌತಶಾಸ್ತ್ರ | 60 |
| | | ಮಧ್ಯಾಹ್ನ 2.30ರಿಂದ 3.50 | ರಸಾಯನಶಾಸ್ತ್ರ | 60 |
| ಹೊರನಾಡು-ಗಡಿನಾಡು ಕನ್ನಡಿಗ ಅಭ್ಯರ್ಥಿಗಳಿಗೆ ಕನ್ನಡ ಭಾಷಾ ಪರೀಕ್ಷಾ (ಬೆಂಗಳೂರು ಕೇಂದ್ರದಲ್ಲಿ ಮಾತ್ರ) | | | | |
| ಮೇ 4 | ಗುರುವಾರ | ಬೆಳಗ್ಗೆ 11.30ರಿಂದ 12.30 | ಕನ್ನಡ | 50 |

